ತಾರೀಖು 3ನೆ ಏಪ್ರೆಲ್ 1907.

ನಂ. 9179—ಸ್ಯಾನಿಟರಿ 129-06—10, ಶಿವಮೊಗ್ಗ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಸ್ಥಳಗಳಿಗೆ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬಂದೊಂದರ ಪಕ್ಕದಲ್ಲಿಯೂ ನಮೂದಿಸಿರುವ ಜಾತ್ರೆ ಮೊದಲಾದ ಕಾಲಗಳಲ್ಲಿ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಆ ಸ್ಥಳಗಳಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ :—

ಜಾತ್ರೆಯ ಹೆಸರು.	ನಡೆಯುವ ಸ್ಥಳ.	ತಾಲ್ಲೂಕು.	ತಾರೀಖು.	
			ಇಂದ.	ಗೆ.
1. ಶ್ರೀ ಅಶ್ವತ್ಥನಾರಾಯಣ ಸ್ವಾಮಿಯವರ ರಥೋತ್ಸವ.	ಮಹಿಷಿ	ತೀರ್ಥಹಳ್ಳಿ	25—4—07	30—4—07
2. ಶ್ರೀ ಹುಚ್ಚರಾಯಸ್ವಾಮಿಯವರ ರಥೋತ್ಸವ.	ಶಿಕಾರಿಪುರ	ಶಿಕಾರಿಪುರ	27—4—07	3—5—07
3. ಬಸವಣ್ಣದೇವರ ರಥೋತ್ಸವ	ಬಸವನಂದಿಹಳ್ಳಿ	ಡಿಟೋ	27—4—07	30—4—07
4. ಶ್ರೀ ಹನುಮಂತದೇವರ ರಥೋತ್ಸವ.	ಮಂಚಿ	ಸೊರಬ	22—4—07	23—4—07
5. ಶ್ರೀ ಆಂಜನೇಯದೇವರ ರಥೋತ್ಸವ.	ಹುರಳಿ	ಡಿಟೋ	28—4—07	

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಶ್ರೀಮ್ ಮಹಾರಾಜರವರ ಸರ್ಕಾರದವರು ಪ್ರತಿ ಒಂದು ಜಾತ್ರೆಯ ಪಕ್ಕದಲ್ಲಿಯೂ ನಮೂದಿಸಿರುವ ತಾರೀಖುಗಳಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಆ ಜಾತ್ರೆಯ ಸ್ಥಳಕ್ಕೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗಳಿಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 12ನೆ ಏಪ್ರೆಲ್ 1907.

ನಂ. 9464—ಸ್ಯಾ. 156-06-17, ಕೋಲಾರ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಸ್ಥಳಗಳಿಗೆ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬಂದೊಂದರ ಪಕ್ಕದಲ್ಲಿಯೂ ನಮೂದಿಸಿರುವ ಜಾತ್ರೆ ಮೊದಲಾದ ಕಾಲಗಳಲ್ಲಿ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಆ ಸ್ಥಳಗಳಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡು ಬಂದಿರುವುದರಿಂದ :—

ಜಾತ್ರೆಯ ಹೆಸರು.	ನಡೆಯುವ ಸ್ಥಳ.	ತಾಲ್ಲೂಕು.	ತಾರೀಖು.	
			ಇಂದ	ಗೆ
1. ಶ್ರೀ ವೆಂಕಟರಮಣಸ್ವಾಮಿ ರಥೋತ್ಸವ.	ಚಿಕ್ಕ ತಿರುಪತಿ	ಮಾಲೂರು	20—4—07	29—4—07
2. ವೀರಪ್ಪನ ಜಾತ್ರೆ	ವಾನರಾಸಿ	ಕೋಲಾರ	18—4—07	25—4—07

1897ನೆ ವರ್ಷದ 2ನೆ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಶ್ರೀಮ್ ಮಹಾರಾಜರವರ ಸರ್ಕಾರದವರು ಪ್ರತಿ ಒಂದು ಜಾತ್ರೆಯ ಪಕ್ಕದಲ್ಲಿಯೂ ನಮೂದಿಸಿರುವ ತಾರೀಖುಗಳಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಆ ಜಾತ್ರೆಯ ಸ್ಥಳಕ್ಕೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗಳಿಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 12ನೆ ಏಪ್ರೆಲ್ 1907.

ನಂ. 9466—ಸ್ಯಾ. 170-06-22, ಮೈಸೂರು ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಸ್ಥಳಗಳಿಗೆ ಪ್ಲೇಗು ತಗುಲಿರುವ ಪ್ರದೇಶಗಳಿಂದ ಒಂದೊಂದರ ಪಕ್ಕದಲ್ಲಿಯೂ ನಮೂದಿಸಿರುವ ಜಾತ್ರೆ ಮೊದಲಾದ ಕಾಲಗಳಲ್ಲಿ ಬರುವ ಜನರು ಅಲ್ಲಿ ಗುಂಪು